ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ರಾಜ್ಯದ ಅತಿಥಿ ಉಪನ್ಯಾಸಕರ ಸಮಸ್ಯೆಗಳ ಕುರಿತು

ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನ ಸಭೆಯಿಂದ ಚುನಾಯಿತರಾದª Àರು):-

828 (871) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಪದವಿ ಕಾಲೇಜುಗಳಲ್ಲಿ ಕೆಲಸ ಮಾಡುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು; ಈ ವರ್ಷ ಇನ್ನು ನೇಮಕಾತಿ ಆಗಿಲ್ಲದಿರುವುದರಿಂದ ಕಳೆದ ಸಾಲಿನ ವಿವರ ನೀಡುವುದು: (2019-2020)

(ಆ) 2019-2020ನೇ ಸಾಲಿನಲ್ಲಿ ರಾಜ್ಯದ ಪದವಿ ಕಾಲೇಜುಗಳಲ್ಲಿ ಒಟ್ಟು ನೇಮಕಗೊ ◌ಂಡಿರುವ ಉಪನ್ಯಾಸಕರ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಸೃಜಿಸಲಾಗಿರುವ ಒಟ್ಟು ಉಪನ್ಯಾಸಕರ ಹುದ್ದೆಗಳು ಎಷ್ಟು; ಖಾಲಿ ಹುದ್ದೆಗಳನ್ನು ತುಂಬಲು ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಸರ್ಕಾರಿ ಪದವಿ ಕಾಲೇಜುಗಳು, ಅನುದಾನಿತ ಪದವಿ ಕಾಲೇಜುಗಳು ಹಾಗೂ ಖಾಸಗಿ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

(ಉ) ಅನೇಕ ವರ್ಷಗಳಿಂದ ಅತಿಥಿ ಉಪನ್ಯಾಸಕರುಗಳಾಗಿ ಎಲ್ಲಾ ಅರ್ಹತೆಗಳೊಂದಿಗೆ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳನ್ನು ರೋಸ್ಟರ್ ಮತ್ತು ಅರ್ಹತೆಯ ಆಧಾರದಲ್ಲಿ ಸೃಜಿಸಲಾಗಿರುವ ಹುದ್ದೆಗಳಲ್ಲಿ ವಿಶೇಷ ಪ್ರಕರಣವೆಂದು ಪರಿಗಣಿಸಿ, ವಿಲೀನಗೊಳಿಸಲು ವಿಶೇಷ

ಕಾನೂನು ರಚನೆ ಮಾಡಿ ಅತಿಥಿ ಉಪನ್ಯಾಸಕರುಗಳ ಸಮಸ್ಯೆ ಪರಿಹಾರಕ್ಕೆ ಸರ್ಕಾರ ಕ್ರಮ ಕೈಗೊಳ್ಳಲಿದೆಯೇ? (ವಿವರ ನೀಡುವುದು)